ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, Ballari - 583 105
ಕುಲಸಚಿವರು
☎ 08392-242703
08392-242097

ಸಂಖ್ಯೆ: ವಿಶ್ರೀಕೃವಿಬ/ಆಡಳಿತ/ಸಾಮಾನ್ಯ/2025-26/1176 ದಿನಾಂಕ: 15.09.2025

## :: ಸುತ್ತೋಲೆ ::

ಈ ಮೂಲಕ ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಸ್ನಾತಕ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು ಹಾಗೂ ಸ್ನಾತಕೋತ್ತರ ಪದವಿಯ ಎಲ್ಲಾ ವಿಭಾಗ/ಘಟಕಗಳ ಮುಖ್ಯಸ್ಥರು/ಸಂಯೋಜಕರುಗಳ ಗಮನಕ್ಕೆ ತರಬಯಸುವುದೇನೆಂದರೆ, ಮಾನ್ಯ ಸರ್ವೋಚ್ಚ ನ್ಯಾಯಾಲಯದಿಂದ ರಚಿತವಾಗಿರುವ ರಾಷ್ಟ್ರೀಯ ಕಾರ್ಯ ಪಡೆಯು ಪಾಲುದಾರರಿಂದ ನಿರ್ಣಾಯಕ ಸಲಹೆಗಳನ್ನು ಸಂಗ್ರಹಿಸಲು ಅಧಿಕೃತ ವೆಬ್‌ಸೈಟ್‌ನ್ನು ರಚಿಸಿದ್ದು, ಅದರಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ, ಕಾಳಜಿಗಳನ್ನು ಪರಿಹರಿಸಲು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಆತ್ಮಹತ್ಯೆಗಳನ್ನು ತಡೆಗಟ್ಟಲು **https://ntf.education.gov.in** ಎಂಬ ವೆಬ್‌ಸೈಟ್‌ನಲ್ಲಿ ವಿದ್ಯಾರ್ಥಿಗಳು, ಪೋಷಕರು, ಬೋಧಕ ವರ್ಗದವರು, ಸಾರ್ವಜನಿಕರು, ಮಾನಸಿಕ ಸೇವೆ ಒದಗಿಸುವವರು ಹಾಗೂ ಸಂಬಂಧಿಸಿದ ಸಂಸ್ಥೆಗಳ ಪ್ರತಿನಿಧಿಗಳು ಸರಣಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕಾಗಿದೆ. ಆದ್ದರಿಂದ ಸ್ನಾತಕ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು ಹಾಗೂ ಸ್ನಾತಕೋತ್ತರ ಪದವಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರು/ಸಂಯೋಜಕರುಗಳು ಸದರಿ ವೆಬ್‌ಸೈಟ್‌ನಲ್ಲಿ ಸದರಿ ಸಮೀಕ್ಷೆಯ ಬಗ್ಗೆ ಅರಿವು ಮೂಡಿಸಲು ವಿದ್ಯಾರ್ಥಿಗಳಿಗೆ ಕಾರ್ಯಕ್ರಮಗಳನ್ನು ಏರ್ಪಡಿಸಿ ಹೆಚ್ಚಿನ ಸಂಖ್ಯೆಯಲ್ಲಿ **ಕನಿಷ್ಠ 25% ಗಿಂತ ಹೆಚ್ಚಿನ ಮಟ್ಟದಲ್ಲಿ** ವಿದ್ಯಾರ್ಥಿಗಳು, ಬೋಧಕರು ಹಾಗೂ ಪೋಷಕರು ಪಾಲ್ಗೊಂಡು ಪ್ರಶ್ನಾವಳಿಗೆ ಕಡ್ಡಾಯವಾಗಿ ಉತ್ತರಿಸುವಂತೆ ಕ್ರಮಕೈಗೊಳ್ಳುವುದು.

ಮುಂದುವರೆದು, ಕೈಗೊಂಡ ಕ್ರಮದ ಅನುಪಾಲನಾ ವರದಿಯನ್ನು ದಿನಾಂಕ. 17.09.2025ರಂದು ಸಂಜೆ: 05.00 ಗಂಟೆಯ ಒಳಗಾಗಿ ವಿಶ್ವವಿದ್ಯಾಲಯದ ನೋಡಲ್ ಅಧಿಕಾರಿಯವರಾದ **ಡಾ. ಕವಿತಾ ಸಾಗರ, ಸಹಾಯಕ ಪ್ರಾಧ್ಯಾಪಕರು, ಸಸ್ಯಶಾಸ್ತ್ರ ವಿಭಾಗ, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ** ಇವರಿಗೆ ಇ-ಮೇಲ್: **drkamsgg@vskub.ac.in** ವಿಳಾಸಕ್ಕೆ ಸಲ್ಲಿಸಲು ತಿಳಿಸುತ್ತಾ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: **8660090853** ಗೆ ಸಂಪರ್ಕಿಸಲು ಸೂಚಿಸಿದೆ.

**ಸೂಚನೆ:** ಭಾರತದ ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದಿಂದ ರಚಿಸಲ್ಪಟ್ಟು ಸಮೀಕ್ಷೆ ಕೈಗೊಂಡಿರುವುದರಿಂದ ಸದರಿ ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಲು ಹಾಗೂ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಈ ಮೂಲಕ ಸೂಚಿಸಲಾಗಿದೆ.

15/9/25
ಕುಲಸಚಿವರು
ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಗೆ,
ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಸ್ನಾತಕ ಪದವಿ ಮಹಾವಿದ್ಯಾಲಯಗಳ
ಪ್ರಾಂಶುಪಾಲರು ಹಾಗೂ ಸ್ನಾತಕೋತ್ತರ ಪದವಿಯ ಎಲ್ಲಾ ವಿಭಾಗ/ಘಟಕಗಳ
ಮುಖ್ಯಸ್ಥರುಗಳು/ನಿರ್ದೇಶಕರು/ಸಂಯೋಜಕರು.

ಪ್ರತಿಗಳು:
1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ವಿಶ್ರೀಕೃ ವಿಶ್ವವಿದ್ಯಾಲಯ, ನಂದಿಹಳ್ಳಿ. 3. ಕಛೇರಿ ಪ್ರತಿ.